All India Radio: Bangalore
National Bulletin In Kannada
23.12.2025 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
23.12.2025 7.35 am

<><*<><>*><>

೧.ಪ್ರಧಾನಿಯವರ ವಿಶೇಷ ರಾಯಭಾರಿಯಾಗಿ ಇಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಶ್ರೀಲಂಕಾಗೆ ಭೇಟಿ

೨.ಭಾರತ-ನ್ಯೂಜಿಲ್ಯಾಂಡ್ ನಡುವಿನ ಮಹತ್ವದ ಮುಕ್ತ ವ್ಯಾಪಾರ ಒಪ್ಪಂದ; ಭಾರತದ ರಫ್ತು ಸರಕುಗಳ ಮೇಲೆ ಶೂನ್ಯ ಸುಂಕ

೩.ದೇಶದಲ್ಲಿ ೫೮೦ ಲಕ್ಷ ಹೆಕ್ಟೇರ್‌ಗೆ ಹೆಚ್ಚಿದ ಹಿಂಗಾರು ಬೆಳೆ ಬಿತ್ತನೆ- ಕೃಷಿ ಸಚಿವಾಲಯ ಮಾಹಿತಿ

೪.ದೇಶದ ಅಭಿವೃದ್ಧಿಯಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಪಾತ್ರ ಮಹತ್ವದ್ದು - ಕೇಂದ್ರ ಸಚಿವ ಪಿಯೂಷ್ ಗೋಯಲ್

೫.ಮಹಿಳಾ ಟಿ-೨೦ ಕ್ರಿಕೆಟ್ ಸರಣಿ; ಎರಡನೇ ಪಂದ್ಯದಲ್ಲಿಂದು ಭಾರತ- ಶ್ರೀಲಂಕಾ ಹಣಾಹಣಿ

<><*<><>*><>

ಪ್ರಧಾನಿಯವರ ವಿಶೇಷ ರಾಯಭಾರಿಯಾಗಿ ಇಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಶ್ರೀಲಂಕಾಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ಜೈಶಂಕರ್ ಶ್ರೀಲಂಕಾದ ನಾಯಕರನ್ನು ಭೇಟಿ ಮಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ಭೇಟಿಯು ಭಾರತದ 'ನೆರೆಹೊರೆಯವರು ಮೊದಲು' ಎಂಬ ನೀತಿಯನ್ನು ಒತ್ತಿ ಹೇಳುತ್ತದೆ. ದಿತ್ವಾ ಚಂಡಮಾರುತದಿಂದ ಉಂಟಾದ ವಿನಾಶವನ್ನು ಪರಿಹರಿಸಲು ಪ್ರಾರಂಭಿಸಲಾದ ಆಪರೇಷನ್ ಸಾಗರ್‌ಬಂಧು ಉಪಕ್ರಮದ ಮೂಲಕ ಭಾರತ ಶ್ರೀಲಂಕಾಕ್ಕೆ ಈಗಾಗಲೇ ಸಹಾಯ ಮಾಡುತ್ತಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಭಾರತ-ನ್ಯೂಜಿಲ್ಯಾಂಡ್ ನಡುವಿನ ಮಹತ್ವದ ಮುಕ್ತ ವ್ಯಾಪಾರ ಒಪ್ಪಂದ ಮಾತುಕತೆ-ಎಫ್‌ಟಿಎ ಯಶಸ್ವಿಯಾಗಿ ಮುಕ್ತಾಯಗೊಂಡ ನಂತರ, ಭಾರತವು ನ್ಯೂಜಿಲೆಂಡ್‌ಗೆ ಶೇಕಡಾ ೧೦೦ ರಷ್ಟು ಸರಕುಗಳನ್ನು ಶೂನ್ಯ ಸುಂಕದಲ್ಲಿ ರಫ್ತು ಮಾಡಲು ಅವಕಾಶ ಪಡೆಯಲಿವೆ. ಮುಕ್ತ ವ್ಯಾಪಾರ ಒಪ್ಪಂದವು ಉಭಯ ದೇಶಗಳ ನಡುವಿನ ಹೂಡಿಕೆ ಪಾಲುದಾರಿಕೆಯನ್ನು ಗಮನಾರ್ಹವಾಗಿ ಬಲಪಡಿಸುತ್ತದೆ. ಒಪ್ಪಂದದ ಭಾಗವಾಗಿ, ಮುಂದಿನ ಹದಿನೈದು ವರ್ಷಗಳಲ್ಲಿ ಭಾರತದಲ್ಲಿ ೨೦ ಬಿಲಿಯನ್ ಅಮೆರಿಕನ್ ಡಾಲರ್ ಹೂಡಿಕೆಗಳನ್ನು ಸುಗಮಗೊಳಿಸಲು ನ್ಯೂಜಿಲೆಂಡ್ ಬದ್ಧವಾಗಿದೆ. ಈ ಪರಸ್ಪರ ಪ್ರಯೋಜನಕಾರಿ ಒಪ್ಪಂದವು ಭಾರತ-ನ್ಯೂಜಿಲೆಂಡ್ ಆರ್ಥಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು

ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣವನ್ನು ಮುನ್ನಡೆಸುತ್ತದೆ ಎಂದು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

<><*<><>*><>

ದೇಶದಲ್ಲಿ ಪ್ರಸಕ್ತ ವರ್ಷದಲ್ಲಿ ಈವರೆಗೆ ೫೮೦ ಲಕ್ಷ ಹೆಕ್ಟೇರ್‌ಗಳಲ್ಲಿ ಹಿಂಗಾರು ಬೆಳೆಗಳನ್ನು ಬಿತ್ತಲಾಗಿದೆ, ಕಳೆದ ವರ್ಷದ ಇದೇ ಅವದಿಗೆ ಹೋಲಿಸಿದರೆ, ಇದು ಸುಮಾರು ೮ ಲಕ್ಷ ಹೆಕ್ಟೇರ್ ಹೆಚ್ಚಾಗಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ೩೦೦ ಲಕ್ಷ ಹೆಕ್ಟೇರ್‌ಗಳಿಗೆ ಹೋಲಿಸಿದರೆ ೩೦೧ ಲಕ್ಷ ಹೆಕ್ಟೇರ್‌ಗಳಿಗಿಂತ ಹೆಚ್ಚು ಗೋಧಿ ಪ್ರದೇಶದ ವ್ಯಾಪ್ತಿ ವರದಿಯಾಗಿದೆ. ದ್ವಿದಳ ಧಾನ್ಯಗಳ ವ್ಯಾಪ್ತಿಯು ೧೨೬ ಲಕ್ಷ ಹೆಕ್ಟೇರ್‌ಗಳಿಗಿಂತಲೂ ಹೆಚ್ಚಿದ್ದರೆ, ಭತ್ತವು ೧೩ ಲಕ್ಷ ಹೆಕ್ಟೇರ್‌ಗಿಂತ ಹೆಚ್ಚಿನ ಗಮನಾರ್ಹ ಏರಿಕೆಯನ್ನು ದಾಖಲಿಸಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><*<><>*><>

ಸಾರ್ವಜನಿಕ ವಲಯದ ಬ್ಯಾಂಕುಗಳು ಬಲವಾದ ಮತ್ತು ಸ್ಪರ್ಧಾತ್ಮಕ ಸಂಸ್ಥೆಗಳಾಗಿ ಹೊರಹೊಮ್ಮಿವೆ, ಭಾರತದ ಬೆಳವಣಿಗೆಗೆ ಬೆಂಬಲ ನೀಡುವಲ್ಲಿ ಖಾಸಗಿ ಮತ್ತು ವಿದೇಶಿ ಬ್ಯಾಂಕುಗಳೊಂದಿಗೆ ಸರಿಸಮನಾಗಿ ನಿಂತಿವೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಎಮ್‌ಎಸ್‌ಎಮ್‌ಇ ಬ್ಯಾಂಕಿಂಗ್ ಶ್ರೇಷ್ಠತೆ ಪ್ರಶಸ್ತಿ ವಿತರಿಸಿ ಮಾತನಾಡಿದ ಸಚಿವರು, ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳನ್ನು ಬೆಂಬಲಿಸುವಲ್ಲಿ ಬ್ಯಾಂಕಿಂಗ್ ವ್ಯವಸ್ಥೆಯ ನಿರ್ಣಾಯಕ ಪಾತ್ರವನ್ನು ಒತ್ತಿ ಹೇಳಿದರು. ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದದ ಹಿಂದಿನ ಘೋಷಣೆಯನ್ನು ಉಲ್ಲೇಖಿಸಿ, ಇದು ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಮುಕ್ತಾಯಗೊಂಡ ಏಳನೇ ಮುಕ್ತ ವ್ಯಾಪಾರ ಒಪ್ಪಂದ ಎಂದು ಸಚಿವರು ತಿಳಿಸಿದರು.

<><*<><>*><>

ಪಶ್ಚಿಮ ಬಂಗಾಳದಲ್ಲಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ- ಎಸ್‌ಐಆರ್ ಅಡಿಯಲ್ಲಿ ಮೊದಲ ಹಂತದ ವಿಚಾರಣೆಯಲ್ಲಿ ಸುಮಾರು ೩೨ ಲಕ್ಷ ಮ್ಯಾಪ್ ಮಾಡದ ಮತದಾರರನ್ನು ಕರೆಯಲಾಗುವುದು. ಎಣಿಕೆ ಹಂತದಲ್ಲಿ, ರಾಜ್ಯಾದ್ಯಂತ ಒಟ್ಟು ೩೧ ಲಕ್ಷ ೬೮ ಸಾವರಿದ ೪೨೪ ಮ್ಯಾಪ್ ಮಾಡದ ಮತದಾರರನ್ನು ಗುರುತಿಸಲಾಗಿದೆ ಎಂದು ಪಶ್ಚಿಮಬಂಗಾಳದ ಚುನಾವಣಾ ಆಯೋಗ ತಿಳಿಸಿದೆ. ೨೦೦೨ ರ ಮತದಾರರ ಪಟ್ಟಿಯಲ್ಲಿರುವ ಕುಟುಂಬ ಸದಸ್ಯರ ಹೆಸರುಗಳೊಂದಿಗೆ ಮತದಾರರು ತಮ್ಮ ಹೆಸರುಗಳನ್ನು ಲಿಂಕ್ ಮಾಡಲು ಸಾಧ್ಯವಾಗದ ಈ ವರ್ಗದ ವಿಚಾರಣೆಗಳು ಇದೇ ೨೬ ರಿಂದ ಪ್ರಾರಂಭವಾಗಲಿವೆ ಎಂದು ಮಾಹಿತಿ ನೀಡಿದೆ. ಪ್ರತಿ ವಿಚಾರಣೆಯನ್ನು ಮೈಕ್ರೋ-ವೀಕ್ಷಕರ ಮೇಲ್ವಿಚಾರಣೆಯಲ್ಲಿ ನಡೆಸಲಾಗುವುದು. ನಾಳೆ ಕೋಲ್ಕತ್ತಾದಲ್ಲಿ ಎರಡು ಹಂತಗಳಲ್ಲಿ ೪ ಸಾವಿರ ಮೈಕ್ರೋ-ವೀಕ್ಷಕರಿಗೆ ತರಬೇತಿ ನೀಡಲಾಗುವುದು. ಇದಕ್ಕೂ ಮೊದಲು, ತೃಣಮೂಲ ಕಾಂಗ್ರೆಸ್

ಮುಖ್ಯಸ್ಥೆ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಮೈಕ್ರೋ-ವೀಕ್ಷಕರಿಗೆ ಸ್ಥಳೀಯ ಬಂಗಾಳಿ ಭಾಷೆಯ ಜ್ಞಾನದ ಕೊರತೆಯಿದೆ ಎಂದು ಆರೋಪಿಸಿದ್ದರು.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ನಾಳೆ ಬ್ಲೂಬರ್ಡ್ ಬ್ಲಾಕ್-೨ ಎಂಬ ಸಂವಹನ ಉಪಗ್ರಹವನ್ನು ಉಡಾವಣೆ ಮಾಡಲಿದೆ. ಅಮೆರಿಕದ ಎಎಸ್‌ಟಿ ಸ್ಪೇಸ್‌ಮೊಬೈಲ್ ಸಂಸ್ಥೆಗೆ ಸೇರಿದ ಈ ಉಪಗ್ರಹವು ಎಲ್‌ವಿಎಂ೩-ಎಂ೬ ಮೂಲಕ ಭೂಮಿಯ ಕೆಳ ಕಕ್ಷೆ ತಲುಪುವ ಅತಿದೊಡ್ಡ ವಾಣಿಜ್ಯ ಸಂವಹನ ಉಪಗ್ರಹವಾಗಿರಲಿದೆ. ಇದು ಮುಂದಿನ ತಲೆಮಾರಿನ ಬ್ಲೂಬರ್ಡ್ ಬ್ಲಾಕ್-೨ ಸಂವಹನ ಉಪಗ್ರಹಗಳ ಭಾಗವಾಗಿದ್ದು, ಸಾಮಾನ್ಯ ಮೊಬೈಲ್ ಸ್ಮಾರ್ಟ್‌ಫೋನ್‌ಗಳಿಗೆ ನೇರವಾಗಿ ಬಾಹ್ಯಾಕಾಶ ಆಧಾರಿತ ಸೆಲ್ಯುಲರ್ ಬ್ರಾಡ್‌ಬ್ಯಾಂಡ್ ಸಂಪರ್ಕವನ್ನು ಒದಗಿಸುವಂತೆ ವಿನ್ಯಾಸಗೊಳಿಸಲಾಗಿದೆ.

<><*<><>*><>

ಕಳೆದ ಹನ್ನೊಂದು ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತತ್ವದ ಸರ್ಕಾರದ ಅಡಿಯಲ್ಲಿ ದೇಶವು ತನ್ನ ಆರೋಗ್ಯ ರಕ್ಷಣಾ ಕ್ಷೇತ್ರದಲ್ಲಿ ಗಮನಾರ್ಹ ಪರಿವರ್ತನೆ ಕಂಡಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಹೇಳಿದ್ದಾರೆ. ಅನವದೆಹಲಿಯಲ್ಲಿ ವರ್ಧಮಾನ್ ಮಹಾವೀರ್ ವೈದ್ಯಕೀಯ ಕಾಲೇಜು ಮತ್ತು ಸಫ್ದರ್ಜಂಗ್ ಆಸ್ಪತ್ರೆಯ ೬ ನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಆರೋಗ್ಯ ಸೇವೆಯನ್ನು ಸುಲಭವಾಗಿ ಮತ್ತು ಕೈಗೆಟುಕುವಂತೆ ಮಾಡುವುದು ಸರ್ಕಾರದ ಗುರಿಯಾಗಿದೆ. ಪ್ರಾಥಮಿಕ ಆರೋಗ್ಯ ಸೇವೆಯಿಂದ ಉನ್ನತ ಆರೋಗ್ಯ ಸೇವೆಯವರೆಗೆ ಸಂಪೂರ್ಣ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು ಸರ್ಕಾರ ತನ್ನ ಅತ್ಯುತ್ತಮ ಪ್ರಯತ್ನಗಳನ್ನು ಮಾಡಿದೆ ಎಂದು ಹೇಳಿದರು. ವಿಶ್ವದ ಅತಿದೊಡ್ಡ ಆರೋಗ್ಯ ವಿಮಾ ಯೋಜನೆಯಾದ ಆಯುಷ್ಮಾನ್ ಭಾರತ್ - ಪಿಎಂಜೆಎವೈ ಯೋಜನೆಯಡಿಯಲ್ಲಿ ೬೨ ಕೋಟಿಗೂ ಹೆಚ್ಚು ಜನರಿಗೆ ೫ ಲಕ್ಷ ರೂಪಾಯಿಗಳವರೆಗೆ ಉಚಿತ ಆರೋಗ್ಯ ರಕ್ಷಣೆಯನ್ನು ಒದಗಿಸಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು. ೨೦೧೪ ರಲ್ಲಿ ೩೮೭ ಇದ್ದ ವೈದ್ಯಕೀಯ ಕಾಲೇಜುಗಳ ಸಂಖ್ಯೆ ೮೦೦ ಕ್ಕಿಂತ ಹೆಚ್ಚಾಗಿದೆ, ಎಂಬಿಬಿಎಸ್ ಸೀಟುಗಳ ಸಂಖ್ಯೆ ೫೧ ಸಾವಿರದಿಂದ ಒಂದು ಲಕ್ಷ ೨೮ ಸಾವಿರ ಸೀಟುಗಳಿಗೆ ಮತ್ತು ಸ್ನಾತಕೋತ್ತರ ಸೀಟುಗಳ ಸಂಖ್ಯೆ ಪ್ರಸ್ತುತ ೩೧ ಸಾವಿರದಿಂದ ಸುಮಾರು ೮೨ ಸಾವಿರ ಸೀಟುಗಳಿಗೆ ಏರಿದೆ ಎಂದು ಸಚಿವರು ಹೇಳಿದರು.

<><*<><>*><>

ಅಮೆರಿಕಕ್ಕೆ ಗ್ರೀನ್‌ಲ್ಯಾಂಡ್ ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಅಗತ್ಯವಿದೆಯೇ ಹೊರತು ಖನಿಜಗಳಿಗಾಗಿ ಅಲ್ಲ ಎಂದು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದು, ಅವರ ವಿಶೇಷ ರಾಯಭಾರಿ ಈ ಜವಾಬ್ದಾರಿಯನ್ನು ವಹಿಸಿಕೊಳ್ಳಲಿದ್ದಾರೆ ಎಂದು ಘೋಷಿಸಿದ್ದಾರೆ. ಅಧ್ಯಕ್ಷ ಟ್ರಂಪ್ ಲೂಸಿಯಾನ ಗವರ್ನರ್ ಜೆಫ್ ಲ್ಯಾಂಡ್ರಿ ಅವರನ್ನು ಗ್ರೀನ್‌ಲ್ಯಾಂಡ್‌ಗೆ ವಿಶೇಷ ರಾಯಭಾರಿಯಾಗಿ ನೇಮಿಸಿದ್ದಾರೆ, ಇದು ಡೆನ್ಮಾರ್ಕ್ ಮತ್ತು ಗ್ರೀನ್‌ಲ್ಯಾಂಡ್‌ನಿಂದ ಟೀಕೆಗೆ ಗುರಿಯಾಗಿದ್ದು, ಎರಡು

ರಾಷ್ಟ್ರಗಳು, ಅಮೆರಿಕದ ನಿಯಂತ್ರಣದ ಯಾವುದೇ ವಿಚಾರವನ್ನು ತಿರಸ್ಕರಿಸಿವೆ. ಈ ಪ್ರದೇಶದಲ್ಲಿ ರಷ್ಯಾ ಮತ್ತು ಚೀನಾದ ಹಡಗುಗಳ ಉಪಸ್ಥಿತಿಯಿಂದಾಗಿ ಗ್ರೀನ್‌ಲ್ಯಾಂಡ್‌ನ ಸ್ಥಳ ಅತ್ಯಗತ್ಯವಾಗಿದೆ ಎಂದು ಅಧ್ಯಕ್ಷ ಟ್ರಂಪ್ ಹೇಳಿದ್ದಾರೆ. ಡೆನ್ಮಾರ್ಕ್‌ನ ಪ್ರಧಾನಿ ಮೆಟ್ಟೆ ಫ್ರೆಡೆರಿಕ್ಸೆನ್ ಮತ್ತು ಗ್ರೀನ್‌ಲ್ಯಾಂಡ್‌ನ ಪ್ರಧಾನಿ ಜೆನ್ಸ್-ಫ್ರೆಡೆರಿಕ್ ನೀಲ್ಸನ್, ಗ್ರೀನ್‌ಲ್ಯಾಂಡ್ ಅದರ ಜನರಿಗೆ ಸೇರಿದ್ದಾಗಿದ್ದು, ಅದನ್ನು ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ತನ್ನ ಭವಿಷ್ಯವನ್ನು ನಿರ್ಧರಿಸುವ ಹಕ್ಕು ಗ್ರೀನ್‌ಲ್ಯಾಂಡ್‌ಗೆ ಇದೆ ಎಂದು ಪ್ರಧಾನಿ ನೀಲ್ಸನ್ ತಿಳಿಸಿದ್ದಾರೆ. ಅಮೆರಿಕಾದ ಈ ಕ್ರಮ ರಾಜತಾಂತ್ರಿಕ ಉದ್ವಿಗ್ನತೆಯನ್ನು ಮತ್ತಷ್ಟು ಹದಗೆಡಿಸಿದೆ.

<><*<><>*><>

ಅಫ್ಘಾನಿಸ್ತಾನಕ್ಕೆ ದೀರ್ಘಕಾಲೀನ ಔಷಧಿಗಳ ಪೂರೈಕೆಯ ಮೇಲೆ ಕೇಂದ್ರೀಕರಿಸಿ, ನಿರಂತರ ಮಾನವೀಯ ನೆರವು ಮತ್ತು ಆರೋಗ್ಯ ಸಹಕಾರಕ್ಕೆ ಭಾರತ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ. ಕಳೆದ ವಾರ ಭಾರತಕ್ಕೆ ಭೇಟಿ ನೀಡಿದ್ದ ಅಫ್ಘಾನಿಸ್ತಾನದ ಸಾರ್ವಜನಿಕ ಆರೋಗ್ಯ ಸಚಿವ ಮೌಲವಿ ನೂರ್ ಜಲಾಲ್ ಜಲಾಲಿ ಅವರೊಂದಿಗಿನ ದ್ವಿಪಕ್ಷೀಯ ಸಭೆಯಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಇದನ್ನು ಪುನರುಚ್ಚರಿಸಿದರು.

<><*<><>*><>

ಭಾರತ ಮತ್ತು ಶ್ರೀಲಂಕಾ ನಡುವಿನ ಐದು ಪಂದ್ಯಗಳ ಮಹಿಳಾ ಕ್ರಿಕೆಟ್ ಸರಣಿಯ ಎರಡನೇ ಟಿ೨೦ ಪಂದ್ಯ ಇಂದು ವಿಶಾಖಪಟ್ಟಣಂನ ಡಾ.ವೈ.ಎಸ್. ರಾಜಶೇಖರ ರೆಡ್ಡಿ ಎಸಿಎ-ವಿಡಿಸಿಎ ಕ್ರೀಡಾಂಗಣದಲ್ಲಿ ನಡೆಯಲಿದೆ.  ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ನಾಯಕಿ ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ ಕಳೆದ ಭಾನುವಾರ ವಿಶಾಖಪಟ್ಟಣಂನಲ್ಲಿ ನಡೆದ ಸರಣಿಯ ಮೊದಲ ಟಿ೨೦ ಪಂದ್ಯದಲ್ಲಿ ಶ್ರೀಲಂಕಾವನ್ನು ಎಂಟು ವಿಕೆಟ್‌ಗಳಿಂದ ಸೋಲಿಸಿ, ಸರಣಿಯಲ್ಲಿ ೧-೦ ಮುನ್ನಡೆ ಸಾಧಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>